1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ , ನ್ಯಾಯಾಧೀಶರವರ

ನ್ಯಾಯಾಲಯ , ಚನ್ನಗಿರಿ .

ಸಿಸಿ ನಂ.**545/2023**

ಹೆಸರುಃ ಪ್ರಶಾಂತ್ ಚಾಸಾಃ 6

ತಂದೆಃ ನಾಗರಾಜಪ್ಪ ಫ್ರಾಸಾ: 4

ವಯಸ್ಸುಃ 40

ಉದ್ಯೋಗಃ ವ್ಯವಸಾಯ

ವಾಸ ಸ್ಥಳಃ ಮುದ್ದೇನಹಳ್ಳಿ ಗ್ರಾಮ , ಚನ್ನಗಿರಿ ತಾಲ್ಲೂಕು.

ಸಾಕ್ಷಿಗೆ ದಿನಾಂಕಃ 05-10-2023 ರಂದು ಪ್ರಮಾಣ ವಚನ

**ಮುಖ್ಯ ವಿಚಾರಣೆಃ** ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ

ಸಾಕ್ಷಿಯು ಈಗ ಮಾಲು ಬಿಡುಗಡೆ ಮಹಜರ್ ನ್ನು ನೋಡುತ್ತಿದ್ದು ಅದರಲ್ಲಿರುವ ತನ್ನ ಸಹಿಯನ್ನು ಗುರುತಿಸಿರುತ್ತಾರೆ. ಸದರಿ ಮಾಲು ಬಿಡುಗಡೆ ಮಹಜರ್ ನ್ನು ಈಗಾಗಲೇ ನಿಶಾನೆ ಪಿ 7 ಎಂದು ಗುರುತಿಸಲಾಗಿದೆ . ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಶಾನೆ ಪಿ 7 (ಸಿ) ಎಂದು ಗುರುತಿಸಲಾಯಿತು. ಅದು ಯಾವ ದಾಖಲೆ ಎಂದು ನನಗೆ ಗೊತ್ತಿಲ್ಲ, ಸದರಿ ಸಹಿಯನ್ನು ಚನ್ನಗಿರಿ ಪೊಲೀಸ್ ಠಾಣೆಯಲ್ಲಿ ಮಾಡಿರುತ್ತೇನೆ. ಸದರಿ ಮಹಜರ್ ನಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ. ನನ್ನ ಜೊತೆ ಯಾರು ಸಹಿ ಮಾಡಿದ್ದಾರೆ ಎಂದು ನನಗೆ ಗೊತ್ತಿಲ್ಲ. ಪೊಲೀಸರು ಏನನ್ನು ವಶಕ್ಕೆ ಬಿಟ್ಟು ಕೊಟ್ಟಿರುವುದಿಲ್ಲ .

**(ಈ ಹಂತದಲ್ಲಿ ಸಾಕ್ಷಿಯು ಮಹಜರ್ ಗೆ ಪ್ರತಿಕೂಲ ಸಾಕ್ಷ್ಯ ನುಡಿದಿದ್ದರಿಂದ ಮಾನ್ಯ ಸಹಾಯಕರ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಲು ಕೇಳಿಕೊಂಡಿದ್ದು, ಮಹಜರ್ ನ್ನು ನೋಡಲಾಗಿ ಸಾಕ್ಷಿಯು ಮಹಜರ್ ಗೆ ಪ್ರತಿಕೂಲ ಸಾಕ್ಷಿ**

**ನುಡಿದಿರುವುದು ಕಂಡು ಬರುತ್ತದೆ. ಆದ್ದರಿಂದ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ನೀಡಲಾಯಿತು.)**

**ಪಾಟಿ ಸವಾಲುಃ ಮಾನ್ಯ ಸಹಾಯಕ ಸರ್ಕಾರಿ ಅಬಿಯೋಜಕರವರಿಂದಃ**

ದಿನಾಂಕಃ 06-03-2023 ರಂದು ಚನ್ನಗಿರಿ ಪೊಲೀಸ್ ಠಾಣಾ ಪಿ.ಐ. ಸಾಹೇಬರ ಕೊಠಡಿಯಲ್ಲಿ ಬೆಳಗ್ಗೆ 11.00 ಗಂಟೆಯಿಂದ 11.30 ಗಂಟೆಯವರೆಗೆ , ಪೊಲೀಸರು ನನ್ನ , ಚಾಸಾ 2 ಮತ್ತು 1 ರವರ ಸಮಕ್ಷಮ ನಿ ಪಿ 7 ರಂತೆ ಪಂಚನಾಮೆಯನ್ನು ಜರುಗಿಸಿದರು ಎಂದರೆ ಸರಿಯಲ್ಲ . ನಿಪಿ 7 ನ್ನು ಜರುಗಿಸುವ ಕಾಲಕ್ಕೆ ನನ್ನ ಜೊತೆ ಚಾಸಾ 1 ಮತ್ತು 2 ರವರು ಸಹಿ ಮಾಡಿರುತ್ತಾರೆ ಎಂದರೆ ಸರಿಯಲ್ಲ . ನಿ ಪಿ 7 ನ್ನು ಜರುಗಿಸುವ ಸಮಯದಲ್ಲಿ ಚಾಸಾ 1 ರವರಿಗೆ ಒಂದು ಮೊಬೈಲ್ ನ್ನು ವಶಕ್ಕೆ ಬಿಟ್ಟುಕೊಟ್ಟಿರುತ್ತಾರೆ ಎಂದರೆ ಸರಿಯಲ್ಲ . ಎಲ್ಲಾ ವಿಚಾರ ಗೊತ್ತಿದ್ದರೂ ಸಹ ಆರೋಪಿಗಳಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು – ಆರೋಪಿತರ ಪರ ವಕೀಲರಿಂದ - ಇರುವುದಿಲ್ಲ.**

**ಮರು ವಿಚಾರಣೆ ಇಲ್ಲ.**

**( ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಪರಿಸಲಾಯಿತು.)**

**ಓ.ಹೇ.ಕೇ. ಸರಿ ಇದೆ.**

**01 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ,**

**ಚನ್ನಗಿರಿ.**